RNU AIR DHARWAD

DECEMBER 21, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ವಿಜಯನಗರ ಜಿಲ್ಲೆ ಪ್ರವಾಸದಲ್ಲಿರುವ ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಖಾತೆ ಸಚಿವರಾದ, ನಿರ್ಮಲಾ ಸೀತಾರಾಮನ್, ಹಂಪಿಯ ವಿಜಯಶ್ರೀ ಹೆರೀಟೇಜ್ ನಲ್ಲಿ ಆಯೋಜಿತ 'ವಿಕಸಿತ ಭಾರತಕ್ಕೆ ಎಐ, ವ್ಯವಹಾರದ ಸೌಲಭ್ಯ ಮತ್ತು ಹಣಕಾಸು' ಅಧಿವೇಶನದಲ್ಲಿ ಪಾಲ್ಗೊಂಡರು. ಕೃತಕ ಬುದ್ಧಿಮತ್ತೆ, ತಂತ್ರಜ್ಞಾನದ ಸಮರ್ಥ ಬಳಕೆಯ ಮೂಲಕ ಸಾಂಸ್ಥಿಕ ಸಾಮರ್ಥ್ಯ ವೃದ್ಧಿ ಮತ್ತು ನೀತಿ ನಿರೂಪಣೆಯನ್ನು ಬಲಪಡಿಸುವುದರ ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿದ್ದವು. ನಿನ್ನೆ ಸಾಯಂಕಾಲ ಹಂಪಿ, ವಿಜಯನಗರ ಅರಸರ ಕಾಲದ, ಆನೆ ಸಾಲಿನ ಆವರಣದಲ್ಲಿ ಆಯೋಜಿಸಿದ್ದ, ಧ್ವನಿ ಮತ್ತು ಬೆಳಕು, ಮನರಂಜನಾ ಕಾರ್ಯಕ್ರಮಗಳನ್ನು ಸಚಿವರು ವೀಕ್ಷಿಸಿದರು.

<><><>

5 ವರ್ಷದೊಳಗಿನ ಪ್ರತಿ ಮಗುವಿಗೆ, 2 ಹನಿ ಪೋಲಿಯೋ ಲಸಿಕೆ ಹಾಕಿಸಿ, ಸಂಪೂರ್ಣ ರಕ್ಷಣೆಯನ್ನು ಖಾತ್ರಿಪಡಿಸುವ ಉದ್ದೇಶದೊಂದಿಗೆ, ಇಂದಿನಿಂದ 24 ರ ವರೆಗೆ ಆಯೋಜಿತ, ಪಲ್ಸ್ ಪೋಲಿಯೋ ಲಸಿಕೆ ಅಭಿಯಾನ ನಾಡಿನಾದ್ಯಂತ ಆರಂಭಗೊಂಡಿದೆ. ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯ ಮಟ್ಟದ ಲಸಿಕೆ ಅಭಿಯಾನಕ್ಕೆ ಚಾಲನೆ ನೀಡಿದರು. ಐದು ವರ್ಷದೊಳಗಿನ ಪುಟ್ಟ ಮಕ್ಕಳನ್ನು, ಪೋಷಕರು ತಮ್ಮ ಸಮೀಪದ ಲಸಿಕಾ ಕೇಂದ್ರಕ್ಕೆ ಕರೆದೊಯ್ದು, ಎರಡು ಹನಿ ಲಸಿಕೆ ಹಾಕಿಸಿ, ಪೋಲಿಯೋ ಮುಕ್ತ ಭಾರತ ಅಭಿಯಾನದ ಜೊತೆಯಾಗಿ ಎಂದು ಅವರು ತಮ್ಮ ಎಕ್ಸ್ ಖಾತೆ ಮೂಲಕ ಕೋರಿದ್ದಾರೆ.

<><><>

ವಿಜಯನಗರ ಜಿಲ್ಲೆ, ಹೊಸಪೇಟೆ ಸಮೀಪದ ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ, ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್ ಚಾಲನೆ ನೀಡಿದರು. ಮಕ್ಕಳಿಗೆ ಲಸಿಕೆ ಹಾಕಿಸುವ ಮೂಲಕ ಪೋಲಿಯೋ ನಿರ್ಮೂಲನೆ ಮಾಡೋಣ ಎಂದು ಕರೆ ನೀಡಿದರು.

<><><>

ನಿರ್ಮಲಾ ಸೀತಾರಾಮನ್ ಧ್ವನಿ 36 ಸೆಕೆಂದುಗಳು

<><><>

ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ–ಪಿಎಂ.ಎಸ್‌ಬಿವೈ, ಅಟಲ್ ಪಿಂಚಣಿ ಯೋಜನೆ–ಎಪಿವೈ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ–ಪಿಎಂಜೆಜೆವೈ ಯೋಜನೆಗಳನ್ನು ಕೆನರಾ ಬ್ಯಾಂಕ್ ಸಹಯೋಗದಲ್ಲಿ ಅನು ಷ್ಠಾನಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಈ ಯೋಜನೆಗಳ ಸದುಪಯೋಗ ಪಡಿಸಿಕೊಂಡು, ಆರ್ಥಿಕ ಸೇರ್ಪಡೆಗೆ ಸಹಕಾರ ನೀಡಬೇಕು ಎಂದು ಕೆನರಾ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಹಾಗೂ ವಲಯ ಮುಖ್ಯಸ್ಥ ಮಹೇಶ್ ಪೈ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದಲ್ಲಿ ನೂತನ ಸ್ಕೌಟ್ ಕ್ಯಾಂಪ್ ರಸ್ತೆ ಶಾಖೆ ಉದ್ಘಾಟಿಸಿ ಅವರು ಮಾತನಾಡಿದರು, ಇಂದು ನಗದು ರಹಿತ ವ್ಯವಹಾರಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಪ್ರತಿಯೊಬ್ಬರೂ ಬ್ಯಾಂಕ್ ಖಾತೆಗಳನ್ನು ಹೊಂದುವುದು ಮುಖ್ಯವಾಗಿದೆ ಎಂದರು.

<><><>

ಮುಂಗಾರು ಹಂಗಾಮಿನಲ್ಲಿ ಗದಗ ಜಿಲ್ಲೆಯಲ್ಲಿ ಅಂದಾಜು 7 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ವಾಣಿಜ್ಯ ಬೆಳೆ ಹತ್ತಿ ಬೆಳೆಯಲಾಗಿದೆ. ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿ ಪ್ರತಿ ಕ್ವಿಂಟಲ್‌ಗೆ 7 ಸಾವಿರದ 710 ರೂಪಾಯಿ ಮತ್ತು ಉದ್ದನೆಯ ಎಳೆ ಹತ್ತಿಗೆ 8 ಸಾವಿರದ 110 ರೂಪಾಯಿ ದರ ಘೋಷಿಸಿದೆ. ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಳ್ಳಲು, ಡಿಸೆಂಬರ 31 ಕೊನೆಯ ದಿನವಾಗಿದ್ದು, ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಗದಗ ಜಿಲ್ಲೆಯ ರೈತರು ಭಾರತೀಯ ಹತ್ತಿ ನಿಗಮದ KAPAS Kisan App ನಲ್ಲಿ ಇದೇ 31 ರ ಒಳಗಾಗಿ ನೋಂದಾಯಿಸಿಕೊಳ್ಳುವಂತೆ ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

<><><>

ಧಾರವಾಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ, ಇದೇ ಬರುವ 25 ರಿಂದ ಸಂಸದ ಕ್ರೀಡಾ ಮಹೋತ್ಸವ 2025–26 ಆಯೋಜಿತವಾಗಲಿದೆ. ಕ್ರೀಡಾ ಮಹೋತ್ಸವವು ಧಾರವಾಡದ ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯಲಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಧಾರವಾಡ ಮತ್ತು ಹಾವೇರಿ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು, ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಜನ ಪ್ರತಿನಿಧಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಧಾರವಾಡ ಲೋಕಸಭಾ ವ್ಯಾಪ್ತಿಯ ಯುವಕ, ಯುವತಿಯರು, ಸಂಸದ್ ಕ್ರೀಡಾ ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ಯಶಸ್ವಿಗೊಳಿಸುವಂತೆ, ತಮ್ಮ ಎಕ್ಸ್ ಖಾತೆ ಮೂಲಕ ಕೋರಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆ ಕಾರವಾರದ ರವೀಂದ್ರನಾಥ ಟ್ಯಾಗೋರ್ ಕಡಲ ತೀರದಲ್ಲಿ, ನಾಳೆಯಿಂದ 28 ರ ವರೆಗೆ, ಕರಾವಳಿ ಉತ್ಸವ ಸಪ್ತಾಹ–2025 ಆಯೋಜಿಸಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಕಾರವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಾತನಾಡಿದ ಅವರು, ಪ್ರತಿದಿನ ಸಂಜೆ 5.30 ರಿಂದ ಮಯೂರವರ್ಮ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ, 22 ರಂದು ಗಾಯಕ ಶಂಕರ ಮಹದೇವನ್, 23 ರಂದು ಸೋನು ನಿಗಮ್ ಸೇರಿದಂತೆ, ಖ್ಯಾತ ಕಲಾವಿದರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>